10) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಪರಿಷತ್ ರಸ್ತೆಗಳ ದುರಸ್ಥಿ

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ): ಮಾನ್ಯ ಅಧ್ಯಕ್ಷರೇ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಬಾರಿ ಬಂದ ಭಾರೀ ಮಳೆಯಿಂದ ಜಿಲ್ಲಾ ಪರಿಷತ್ ರಸ್ತೆಗಳು ಕೊಚ್ಚಿಹೋಗಿ ನಾದುರಸ್ಥಿಯಲ್ಲಿವೆ. ಗ್ರಾಮೀಣ ಪ್ರದೇಶದ ರಸ್ತೆಯಂತೂ ತೀರ ನಾದುರಸ್ಥಿಯಲ್ಲಿವೆ. ಈ ರಸ್ತೆಗಳ ನಾದುರಸ್ತಿಯಿಂದ ಕೆದೂರು ಮಂಡಲದ ಬೇಳೂರು, ಅಮಾವಾಸ್ಯೆಬೈಲು ಮಂಡಲದ ಜಡ್ಡಿನ ಗದ್ದೆ, ಹೆಂಗವಳ್ಳಿ, ಬಿಜ್ಕಲ್ ಕಟ್ಟೆ ಮಂಡಲದ ಮೊಳಹಳ್ಳಿ ಮತ್ತು ಕರಾವಳಿಗಳ ಬಸ್ ಓಡಾಟವನ್ನು ನಿಲ್ಲಿಸಿರುವುದು ತಿಳಿದುಬಂದಿದೆ. ಈ ನಾದುರಸ್ಥಿ ರಸ್ತೆಗಳನ್ನು ರಿಪೇರಿ ಮಾಡದೇ ಇರುವುದರಿಂದಲೂ ಹಾಗೂ ಬಸ್ ಮತ್ತು ವಾಹನ ಸಂಚಾರದ ವ್ಯವಸ್ಥೆ ಅಸ್ತವ್ಯಸ್ತಗೊಂಡಿರುವುದರಿಂದಲೂ ಸಾರ್ವಜನಿಕರಿಗೆ ಮತ್ತು ವಿದ್ಯಾರ್ಥಿಗಳ ದೈನಂದಿನ ಕಾರ್ಯಕ್ಕೆ ತುಂಬಾ ತೊಂದರೆಯಾಗಿರುತ್ತದೆ.

ಆದ್ದರಿಂದ ಈ ಬಗ್ಗೆ ಪರಿಶೀಲಿಸಿ ಈ ಮಳೆಯಿಂದಾಗಿ ಹಾಳಾಗಿ ನಾದುರಸ್ತಿಯಲ್ಲಿರುವ ರಸ್ತೆಗಳನ್ನು ತುರ್ತು ರಿಪೇರಿ ಮಾಡುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಸರ್ಕಾರವನ್ನು ಈ ಸದನದ ಮೂಲಕ ನಾನು ಒತ್ತಾಯಿಸುತ್ತೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ (ವಿದ್ಯಾ ಸಚಿವರು): ಮಾನ್ಯ ಅಧ್ಯಕ್ಷರೇ, ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್, ಪಶುಸಂಗೋಪನೆ ಮಾನ್ಯ ಸದಸ್ಯರು ಎತ್ತಿದಂಥ ವಿಷಯದ ಬಗ್ಗೆ ಗಮನವನ್ನು ಹರಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ತಿಳಿಸುತ್ತೇನೆ.

ಶಾಸನ ರಚನಾ ಕಾರ್ಯಕಲಾಪಗಳು

ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣೆ) (ತಿದ್ದುಪಡಿ) ವಿಧೇಯಕ 1991

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1991ನೇ ಇಸವಿಯ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ: "1991ನೇ ಇಸವಿಯ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣೆ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1991ನೇ ಇಸವಿಯ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಅನುಬಂಧ ವಿಧೇಯಕವನ್ನು ಮಂಡಿಸಲಾಗಿದೆ.

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾ ನಿರ್ಣಯದ ಮೇಲೆ ಚರ್ಚೆ

ಅಧ್ಯಕ್ಷರು: ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣ ಪ್ರಸ್ತಾಪ. ಈಗ ಈ ಪ್ರಸ್ತಾವಕ್ಕೆ ಎರಡು ತಿದ್ದುಪಡಿಗಳು ಬಂದಿವೆ. ಒಂದು ಮಾನ್ಯ ಪಿ.ಜಿ.ಆರ್. ಸಿಂಧ್ಯ ಅವರದು, ಇನ್ನೊಂದು ಪ್ರೊ. ನಂಜುಂಡಸ್ವಾಮಿ ಅವರದು. ಈಗ ಮಾನ್ಯ ಸಿಂಧ್ಯ ಅವರು ಇಲ್ಲ, ಈಗ ಅವರ ತಿದ್ದುಪಡಿ ಇದೆ. ಈಗ ಅವರು ಇಲ್ಲ. ಈಗ ಪ್ರೊ. ನಂಜುಂಡಸ್ವಾಮಿಯವರು ತಮ್ಮ ತಿದ್ದುಪಡಿಗಳನ್ನು ಮಂಡಿಸುವುದು.